ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ ⋆ ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

50 GOLDEN JUBILEE 1964-2014 JSS COLLEGE OF ARTS, COMMERCE & SCIENCE OOTY ROAD, MYSORE

100 1916 H.H. Jagadguru 2015 Dr. Sri Shivarathri Rajendra Mahaswamiji Centenary Celebrations

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ : **20.08.2016**

## ಪ್ರಕಟಣೆಯ ಕೃಪೆಗಾಗಿ

## ಕಟ್ಟಕಡೆಯ ವ್ಯಕ್ತಿಗೆ ತಲುಪದ ವಿಜ್ಞಾನ ಮತ್ತು ತಂತ್ರಜ್ಞಾನ ನಿಷ್ಪ್ರಯೋಜಕ

– ಡಾ. ರಾಕೇಶ್ ಕುಮಾರ್ ಶರ್ಮ

"ವಿಜ್ಞಾನ ಮತ್ತು ತಂತ್ರಜ್ಞಾನಮಯವಾದ ಲೋಕದಲ್ಲಿ ನಾವಿದ್ದೇವೆ. ಎಲ್ಲಾ ಕ್ಷೇತ್ರವನ್ನು ಇವು ಆಕ್ರಮಿಸಿಕೊಂಡಿವೆ. ಆದರೆ ಈ ವಿಜ್ಞಾನ ಮತ್ತು ತಂತ್ರಜ್ಞಾನ ಕಟ್ಟಕಡೆಯ ವ್ಯಕ್ತಿಗೆ ತಲುಪದೇ ಹೋದರೆ ಅವುಗಳಿಂದ ಯಾವುದೇ ಪ್ರಯೋಜನವಾಗುವುದಿಲ್ಲ" ಎಂದು ಮೈಸೂರಿನ ರಕ್ಷಣಾ ಆಹಾರ ಸಂಶೋಧನಾ ಪ್ರಯೋಗಾಲಯದ ನಿರ್ದೇಶಕರಾದ ಡಾ. ರಾಕೇಶ್ ಕುಮಾರ್ ಶರ್ಮರವರು ಅಭಿಪ್ರಾಯಪಟ್ಟರು.

ಶ್ರೀಯುತರು ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜನ್ಮಶತಮಾನೋತ್ಸವ ಮತ್ತು ಕಾಲೇಜಿನ ಸುವರ್ಣ ಮಹೋತ್ಸವದ ಅಂಗವಾಗಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರಚಾರ ಸಂಸ್ಥೆಯ ಸಹಯೋಗದೊಂದಿಗೆ ಆಗಸ್ಟ್ 20ರಿಂದ 22ರವರೆಗೆ ಏರ್ಪಡಿಸಲಾಗಿರುವ ರಾಜ್ಯಮಟ್ಟದ ವಿಜ್ಞಾನ ವಸ್ತುಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು. ಅವರು " 'ವಿಜ್ಞಾನ ಮತ್ತು ಹಳ್ಳಿ' ಎಂಬ ಕಲ್ಪನೆಯ ಅಡಿಯಲ್ಲಿ ನಡೆಯುತ್ತಿರುವ ಈ ವಸ್ತುಪ್ರದರ್ಶನವು ಜೈ ಜವಾನ್, ಜೈ ಕಿಸಾನ್ ಎಂಬ ಘೋಷಣೆಯನ್ನು ನೆನಪಿಗೆ ತರುತ್ತದೆ. ಅದರ ಜೊತೆಗೆ ಜೈ ವಿಜ್ಞಾನ್ ಎಂಬುದು ಈ ವಸ್ತು ಪ್ರದರ್ಶನದ ಆಶಯದಲ್ಲಿ ಬೆರೆತಿದೆ. ಯಾವುದೇ ವಿಷಯವನ್ನು ಬೋಧನೆಗಿಂತ ದೃಶ್ಯ ಮತ್ತು ಶ್ರವ್ಯ ಮಾಧ್ಯಮದಲ್ಲಿ ಪ್ರಸ್ತುತ ಪಡಿಸಿದರೆ ಅದರ ಪರಿಣಾಮ ಹೆಚ್ಚಿರುತ್ತದೆ. ಆ ದಿಸೆಯಲ್ಲಿ ಇಂತಹ ವಸ್ತುಪ್ರದರ್ಶನಗಳ ಆಯೋಜನೆ ಅತ್ಯಗತ್ಯವಾದುದು" ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮೈಸೂರು ವಿಶ್ವವಿದ್ಯಾನಿಲಯದ ವಿಜ್ಞಾನ ನಿಕಾಯದ ಡೀನ್‌ಆದ ಪ್ರೊ. ಎ. ಬಾಲಸುಬ್ರಹ್ಮಣಿಯನ್ ಅವರು ಮಾತನಾಡಿ "ವಿಜ್ಞಾನ ಮತ್ತು ತಂತ್ರಜ್ಞಾನ ಬಹಳಷ್ಟು ಬೆಳೆದಿದೆ. ನಾವು ಅದನ್ನು ಬಹಳ ಚೆನ್ನಾಗಿಯೇ ಬಳಸಿಕೊಳ್ಳುತ್ತಿದ್ದೇವೆ. ಆದರೆ ಆ ಎತ್ತರಕ್ಕೆ ಮಾನವನು ಬೆಳೆಯಬೇಕಿದೆ. ಇಂದು ವಿಜ್ಞಾನ ಮತ್ತು ತಂತ್ರಜ್ಞಾನ ಹಳ್ಳಿಗಳನ್ನು ಒಳಗೊಂಡಂತೆ ಎಲ್ಲೆಡೆ ವಿಸ್ತಾರಗೊಂಡಿದೆ. ಇದಕ್ಕೆ ವಿದ್ಯಾರ್ಥಿಗಳ ಕೊಡುಗೆ ಅಪಾರವಾದುದು. ಈ ವಸ್ತುಪ್ರದರ್ಶನದಲ್ಲಿ ಸಕ್ರಿಯವಾಗಿ ಭಾಗವಹಿಸಿ, ಕಲಿಯಿರಿ, ಪರಸ್ಪರ ಹಂಚಿಕೊಳ್ಳಿ. ಭಾರತದ ವಿಜ್ಞಾನ ಕ್ಷೇತ್ರಕ್ಕೆ ಕೊಡುಗೆ ನೀಡಿರಿ' ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಟಿ.ಡಿ. ಸುಬ್ಬಣ್ಣನವರು 'ಪೂಜ್ಯ ರಾಜೇಂದ್ರ ಶ್ರೀಗಳವರ ಜನ್ಮಶತಮಾನೋತ್ಸವ ಸಂದರ್ಭದಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮ ಬಹಳ ಅರ್ಥಪೂರ್ಣವಾದುದು. ನಮ್ಮ ಜೆಎಸ್‌ಎಸ್ ಸಂಸ್ಥೆಯ ವಿದ್ಯಾರ್ಥಿಗಳು ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಭಾಗವಹಿಸಿ ರಾಷ್ಟ್ರಮಟ್ಟದಲ್ಲಿ ಪ್ರಥಮ ಸ್ಥಾನವನ್ನು ಪಡೆದಿದ್ದಾರೆ. ಈ ವಸ್ತುಪ್ರದರ್ಶನದ ಸದುಪಯೋಗವನ್ನು ಪಡೆದು ವಿಜ್ಞಾನ ಕ್ಷೇತ್ರಕ್ಕೆ ನಿಮ್ಮ ಕೊಡುಗೆಯನ್ನು ನೀಡಿರಿ" ಎಂದು ಹೇಳಿದರು.

ಕಾಲೇಜು ಸಮುಚ್ಚಯದ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಪ್ರಾಸ್ತಾವಿಕ ಮಾತುಗಳನ್ನಾಡಿ ಸ್ವಾಗತ ಕೋರಿದರು. ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ವಂದಿಸಿದರು. ಕು. ಕೀರ್ತನಾ ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕರಾದ ಡಾ. ಅಭಿಜಿತ್ ಎಂ. ಸಿಂಗ್ ಅವರು ನಿರೂಪಿಸಿದರು. ಸುವರ್ಣ ಮಹೋತ್ಸವ ಆಚರಣಾ ಸಮಿತಿಯ ಕಾರ್ಯದರ್ಶಿಗಳಾದ ಪ್ರೊ. ಡಿ. ಎಸ್. ಸದಾಶಿವಮೂರ್ತಿ, ವಿಜ್ಞಾನ ವಸ್ತು ಪ್ರದರ್ಶನದ ಸಂಚಾಲಕರಾದ ಡಾ. ವಿಜಯ ಮಂಜುನಾಥ್‌ಗುರು, ಸಂಘಟನಾ ಕಾರ್ಯದರ್ಶಿಗಳಾದ ಡಾ. ಬಿ.ಕೆ. ಕೆಂಡಗಣ್ಣಸ್ವಾಮಿ, ಡಾ. ಬಿ.ವೈ. ಸತೀಶ್‌ಕುಮಾರ್ ಉಪಸ್ಥಿತರಿದ್ದರು.

ಗೆ,

ಸಂಪಾದಕರು

\-\-\-\-\-\-\-\-\-\-\-\-\-\-\-\-\-\-\-\-

\-\-\-\-\-\-\-\-\-\-\-\-\-\-\-\-\-\-\-\-

ಪ್ರಾಂಶುಪಾಲರು